# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 110 ಎಸ್ ಎಸ್ ಕೆ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:07.04.2022

## ಅಧಿಸೂಚನೆ

ವಿಷಯ: ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧೀಕ್ಷಕ ಇಂಜಿನಿಯರ್ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ದಿನಾಂಕ:01.3.2022 ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 160 ಸೇಶಿಕಾ 2019 ದಿನಾಂಕ: 27.11.2020.

* * * *

ಲೋಕೋಪಯೋಗಿ ಇಲಾಖೆಯ ವಿವಿಧ ವೃಂದಗಳ ತಾಂತ್ರಿಕ ಮತ್ತು ಲಿಪಿಕ ನೌಕರರುಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಲ ಸಂಪನ್ಮೂಲ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಗಳಿಗೆ ಹಂಚಿಕೆ ಮಾಡುವ ಸಂಬಂಧ ಮೂರು ಇಲಾಖೆಗಳ ಸಹಮತಿಯೊಂದಿಗೆ ಕ್ರಮ ವಹಿಸಲಾಗಿದ್ದು, ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿ ವಿವಿಧ ವೃಂದಗಳ ತಾಂತ್ರಿಕ ಅಧಿಕಾರಿಗಳನ್ನು (ಗ್ರೂಪ್-ಎ) ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಶಾಶ್ವತವಾಗಿ ವಿಲೀನಗೊಳಿಸಲಾಗಿದೆ.

ಈ ರೀತಿ ಶಾಶ್ವತವಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ವಿಲೀನಗೊಂಡಿರುವ ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಇಂಜಿನಿಯರ್ ಗಳ ಜೇಷ್ಠತೆಯನ್ನು ಸದರಿಯವರುಗಳು ಅಧೀಕ್ಷಕ ಇಂಜಿನಿಯರ್ ವೃಂದಕ್ಕೆ ಪಡೆದ ಅರ್ಹತಾ ದಿನಾಂಕವನ್ನು ಆಧರಿಸಿ ಕರಡು ಜೇಷ್ಠತಾ ಪಟ್ಟಿಯನ್ನು ದಿನಾಂಕ:01.3.2022 ರಲ್ಲಿರುವಂತೆ ತಯಾರಿಸಿ ಈ ಅಧಿಸೂಚನೆಗೆ ಲಗತ್ತಿಸಿದೆ.

ಸದರಿ ಕರಡು ಜೇಷ್ಠತಾ ಪಟ್ಟಿಯ ಬಗ್ಗೆ ಬಾಧಿತ ವ್ಯಕ್ತಿಗಳು ಯಾವುದೇ ಆಕ್ಷೇಪಣೆ/ ಸಲಹೆಗಳನ್ನು ಸಲ್ಲಿಸಲು ಬಯಸಿದಲ್ಲಿ ಕರಡು ಜೇಷ್ಠತಾ ಪಟ್ಟಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅಂತಹ ಆಕ್ಷೇಪಣೆ / ಸಲಹೆಗಳನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು

ಇವರಿಗೆ ಸಲ್ಲಿಸತಕ್ಕದ್ದು ಅಥವಾ ಇ-ಮೇಲ್ ವಿಳಾಸ : principalsecretaryrdpr@gmail.com ಅಥವಾ servicesardpr@gmail.com ಗೆ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/4

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ.

<u>ಪ್ರತಿಯನ್ನು</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ ಜಲ ಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ,
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
6. ಮುಖ್ಯ ಕಾರ್ಯಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
9. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಸೂಚನಾ ಫಲಕ

ಅಧಿಸೂಚನೆ ಸಂಖ್ಯೆ: ಗ್ರಾಅಪ 110 ಎಸ್ ಎಸ್ ಕೆ 2022, ದಿನಾಂಕ: 07.04.2022 ಕ್ಕೆ ಅನುಬಂಧ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧೀಕ್ಷಕ ಇಂಜಿನಿಯರ್‌ಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿ
(ದಿನಾಂಕ: 01.3.2022 ರಲ್ಲಿದ್ದಂತೆ)

| ಕ್ರಮ ಸಂಖ್ಯೆ | ಅ.ಇಂ.,. ವೃಂದದಲ್ಲಿನ ಜೇಷ್ಠತಾ ಕ್ರಮಾಂಕ | ಹೆಸರು | ಹುಟ್ಟಿದ ದಿನಾಂಕ | ಸೇವೆಗೆ ಸೇರಿದ ದಿನಾಂಕ | ಅಧೀಕ್ಷಕ ಇಂಜಿನಿಯರ್ ವೃಂದಕ್ಕೆ ಪದೋನ್ನತಿ ಹೊಂದಿದ ದಿನಾಂಕ: | ಅಧೀಕ್ಷಕ ಇಂಜಿನಿಯರ್ ವೃಂದಕ್ಕೆ ಪದೋನ್ನತಿ ಹೊಂದಲು ಅರ್ಹತಾ ದಿನಾಂಕ | ಷರಾ |
|---|---|---|---|---|---|---|---|
| 01 | 2400 (ಲೋ.ಇ. ಸೇವೆ) | ಕುಮಾರ್ ಕೆ. | 12.06.1962 | 31.10.1987 | 08.11.2019 | 08.11.2019 | |
| 02 | 2903 (ಲೋ.ಇ. ಸೇವೆ) | ನಾಗರಾಜ ಕೆ.ಟಿ. | 12.05.1963 | 09.01.1987 | 08.11.2019 | 08.11.2019 | |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.